ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) : ಅ) ಸುವರ್ಣ ಗ್ರಾಮೋದಯ ಯೋಜನೆಯಡಿ ಕುಣಿಗಲ್ ತಾಲ್ಲೂಕಿನಲ್ಲಿ 10 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ.

ಪ್ರತಿ ಗ್ರಾಮಗಳಿಗೆ ನಿಗದಿಪಡಿಸಿ ಅನುದಾನದ ವಿವರ:–

1. ಉಜ್ಜನಿ – ರೂ.130.72, 2. ಬೀರಗಾನಹಳ್ಳಿ – ರೂ.85.06,
3. ಹೇರೂರು – ರೂ.68.00, 4. ಸಂತೆಮಾವತ್ತೂರು ರೂ.65.50,
5. ಹುತ್ರಿ – ರೂ.58.76, 6. ಯಡವಾಣಿ – ರೂ.49.40,
7. ಯಡಿಯೂರು – ರೂ.48.67, 8. ನಾಗಸಂದ್ರ – ರೂ.58.29,
9. ಅಂಕನಹಳ್ಳಿ– ರೂ. 15.03 ಮತ್ತು ಚಿಕ್ಕೋನಹಳ್ಳಿ – ರೂ.15.03 ಹಾಗೂ 10. ಹೇರೋಹಳ್ಳಿ – ರೂ. 35.19.

ಆ) ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರುಗಳ ಶಿಫಾರಸ್ಸು ಮತ್ತು ಅನುಮೋದಿಸಿದ ಒಟ್ಟು 10 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ.

ಇ) ತಾಲ್ಲೂಕಿಗೆ ನಿಗದಿಯಾದ ಅನುದಾನವನ್ನು ಒಟ್ಟು ಆ ತಾಲ್ಲೂಕಿನಲ್ಲಿ ಆಯ್ಕೆಯಾದ ಆಯಾ ಗ್ರಾಮಗಳ ಜನಸಂಖ್ಯೆಗನುಗುಣವಾಗಿ ಹಂಚಿಕೆ ಮಾಡಲಾಗಿದೆ.

ಈ) ತಾಲ್ಲೂಕಿಗೆ ನಿಗದಿಯಾದ ಅನುದಾನವನ್ನು ಒಟ್ಟು ಆ ತಾಲ್ಲೂಕಿನಲ್ಲಿ ಆಯ್ಕೆಯಾದ ಆಯಾ ಗ್ರಾಮಗಳ ಜನಸಂಖ್ಯೆಗನುಗುಣವಾಗಿ ಹಂಚಿಕೆ ಮಾಡಲಾಗಿದೆ.

ಉ) ಮಾನ್ಯ ಮುಖ್ಯಮಂತ್ರಿಯವರ ಆದೇಶದ ಮೇರೆಗೆ ಯಡಿಯೂರು ಗ್ರಾಮವನ್ನು ಆಯ್ಕೆ ಮಾಡಲಾಗಿದೆ.

ಉರ್ದು ಮಾಧ್ಯಮ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ

802 (82) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ತಾಲ್ಲೂಕಿನಲ್ಲಿರುವ ಉರ್ದು ಶಾಲೆಗಳೆಷ್ಟು? ಆ ಶಾಲೆಗಳಲ್ಲಿ ಬ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳೆಷ್ಟು? (ಪ್ರಾಥಮಿಕ ಮಾಧ್ಯಮಿಕ ಮತ್ತು ಪ್ರೌಢ ಶಾಲೆಗಳ ವಿವರಗಳನ್ನು ಒದಗಿಸುವುದು);

ಆ) ಕುಣಿಗಲ್ ತಾಲ್ಲೂಕಿನಲ್ಲಿ ಉರ್ದು ಮಾಧ್ಯಮ ಪದವಿ ಪೂರ್ವ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ, ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಸಲುವಾಗಿ ಉರ್ದು ಭಾಷೆಯ ಒಂದು ಪದವಿ ಪೂರ್ವ ಕಾಲೇಜನ್ನು ಸರ್ಕಾರ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ)

ಶಾಲೆಗಳು	ಸಂಖ್ಯೆ	ಮಕ್ಕಳ ಸಂಖ್ಯೆ
ಪ್ರಾಥಮಿಕ	22	1760
ಮಾಧ್ಯಮಿಕ	11	310
ಪ್ರೌಢ	01	158

ಆ) ಹೌದು.

ಇ) ರಾಜ್ಯದಲ್ಲಿ ಪದವಿ ಪೂರ್ವ ಶಿಕ್ಷಣವನ್ನು ಉರ್ದು ಭಾಷಾ ಮಾಧ್ಯಮದಲ್ಲಿ ಬೋಧಿಸಲು ಅವಕಾಶ ಕಲ್ಪಿಸಲಾಗಿಲ್ಲ. ಅವಶ್ಯವಿರುವ ಕಡೆಗೆ ಉರ್ದು ಭಾಷೆಯನ್ನು ಒಂದು ಭಾಷಾ ವಿಷಯವನ್ನಾಗಿ ಬೋಧಿಸಲು ಅವಕಾಶ ಕಲ್ಪಿಸಲಾಗಿದೆ. ಉಳಿದಂತೆ ಐಚ್ಛಿಕ ವಿಷಯವನ್ನು ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಮಾತ್ರ ಅಭ್ಯಾಸ ಮಾಡಬಹುದಾಗಿದೆ.

ಮೀನುಗಾರರ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ

804 (1330) ಶ್ರೀ ರಮೇಶ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗ ಪಟ್ಟಣ) : ಮಾನ್ಯ ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ಮತಕ್ಷೇತ್ರದಲ್ಲಿ ಹೆಚ್ಚು ಮೀನುಗಾರರು ವಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;